ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿಯ ಕಾಮಗಾರಿಗಳು

ಶ್ರೀ ರಘುನಾಥ್‌ರಾವ್ ಮಲ್ಕಾಪುರೆ(ವಿಧಾನಸಭೆಯಿಂದ ಚುನಾಯಿತರಾದವರು) –

525 (525) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯಿಂದ ಕೈಗೆತ್ತಿಕೊಂಡಿರುವ ಯೋಜನೆಗಳು ಯಾವುವು; (ಪ್ರತ್ಯೇಕ ಕಾಮಗಾರಿವಾರು, ಯೋಜನೆವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ಯೋಜನೆಗಳಿಗೆ ಮಂಜೂರು ಮಾಡಿರುವ /ಬಿಡುಗಡೆ ಮಾಡಿರುವ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು; (ಗುತ್ತಿಗೆದಾರರವಾರು, ಯೋಜನೆವಾರು, ಕಾಮಗಾರಿವಾರು ಸ್ಪಷ್ಟ ಮಾಹಿತಿ ನೀಡುವುದು)

(ಇ) ಹಾಗಿದ್ದಲ್ಲಿ, ಕೈಗೊಂಡ ಯೋಜನೆಗಳನ್ನು ಯಾವಾಗ ಪೂರ್ಣಗೊಳಿಸಬೇಕಾಗಿತ್ತು; ಈಗ ಯಾವ ಹಂತದಲ್ಲಿವೆ; (ಯೋಜನೆವಾರು ವಿವರ ಒದಗಿಸುವುದು)

(ಈ) ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?